ಪ್ರಾರಂಭಿಸಲಾಗುವುದು?

ಅ) ಬಸ್ ನಿಲ್ದಾಣಕ್ಕಾಗಿ ಈಗಾಗಲೇ ಜಾಗವನ್ನು ವಶಪಡಿಸಿಕೊಳ್ಳಲಾಗಿದೆಯೇ ಎಷ್ಟು ಜಾಗವನ್ನು ವಶಪಡಿಸಿಕೊಳ್ಳಲಾಗಿದೆ? ಇನ್ನೂ ಎಷ್ಟು ಜಾಗ ಅಗತ್ಯವಿದೆ?

ಇ) ಬಸ್ ನಿಲ್ದಾಣದ ಯೋಜನೆ ಈಗ ಯಾವ ಹಂತದಲ್ಲಿದೆ?

ಉತ್ತರಿಸುವ ಸಚಿವರು: ಶ್ರೀ ಸಿ.ಆರ್.ಸಗೀರ್ ಅಕ್ಮದ್(ಸಾರಿಗೆ ಸಚಿವರು)

ಉತ್ತರ

ಅ) ಇದೆ.

ಬಸ್ ನಿಲ್ದಾಣಕ್ಕಾಗಿ ಹೆಚ್ಚುವರಿ ನಿವೇಶನ ಅಗತ್ಯವಿದ್ದು, ಇದನ್ನು ಪಡೆದುಕೊಂಡ ನಂತರ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಆ) ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ಸರ್ವೆ ಸಂಖ್ಯೆ 278.1ರಲ್ಲಿ 0.79 ಎಕರೆ ಜಮೀನನ್ನು ದಿನಾಂಕ:1-06-1998ರಲ್ಲಿ ಸಾರಿಗೆ ನಿಗಮದ ವಶಕ್ಕೆ ಪಡೆಮಕೊಳ್ಳಲಾಗಿದೆ. ಸದರಿ ನಿವೇಶನ ಹಿಂಭಾಗದಲ್ಲಿರುವ 0.60 ಎಕರೆ ಹೆಚ್ಚುವರಿ ಜಾಗ ಅಗತ್ಯವಿದೆ.

ಇ) ಬಸ್ ನಿಲ್ದಾಣದ ನಿರ್ಮಾಣಕ್ಕಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಹಣ ಒದಗಿಸಲಾಗಿದ್ದು 0.60 ಹೆಚ್ಚುವರಿ ಎಕರೆ ಜಮೀನನ್ನು ಸಂಸ್ಥೆಯ ವಶಕ್ಕೆ ತೆಗೆದುಕೊಂಡು ನಂತರ ನಿಗಮದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿರಿಸಿಕೊಂಡು ನಿರ್ಮಾಣ ಕಾರ್ಯ ಕೈಗೊಳ್ಳಲಾಗುವುದು.

ಪೌರಾಡಳಿತ ನಿರ್ದೇಶನಾಲಯದ ಕಾರ್ಯ ವೈಖರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 892(278)

ಸದಸ್ಯರ ಹೆಸರು: ಆತ್ಮಾನಂದ ಎಂ.ಎಸ್.(ಮಂಡ್ಯ)

ಪ್ರಶ್ನೆ

ಅ) ನಗರಸಭೆ ಹಾಗೂ ಪುರಸಭೆಗಳಿಂದ ಪೌರಾಡಳಿತ ವಿಚಾರಗಳಲ್ಲಿ ಪೌರಾಡಳಿತ ನಿರ್ದೇಶನಾಲಯಕ್ಕೆ ಸಲ್ಲಿಸುವ ಪ್ರಸ್ತಾವನೆಗಳಿಗೆ ಅಂಕಿತ ದೊರೆಯಲು ತೀರ ವಿಳಂಬವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದಾಗಿ, ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದರಿಂದ ಸಮಸ್ಯೆಗಳಿಗೆ ಗುರಿಯಾಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ?

ಇ) ಹಾಗಿದ್ದಲ್ಲಿ ಪೌರಾಡಳಿತ ನಿರ್ದೇಶನಾಲಯದ ಕಾರ್ಯವೈಖರಿ ಸುಧಾರಿಸಲು ಹಾಗೂ ನಿರ್ದೇಶನಾಲಯಕ್ಕೆ ಪ್ರದತ್ತವಾಗಿರುವ ಅಧಿಕಾರ ವಿಕೇಂದ್ರೀಕರಣಗೊಳಿಸಲು ಸರ್ಕಾರ ತೀರ್ಮಾನಿಸಿದೆಯೇ?

ಈ) ಹಾಗಿದ್ದಲ್ಲಿ, ಈ ಬಗೆಗೆ ಯಾವ ಕ್ರಮವನ್ನು ಸರ್ಕಾರವು ಕೈಗೊಳ್ಳುತ್ತದೆ?

ಉತ್ತರಿಸುವ ಸಚಿವರು: ಶ್ರೀ ಎಂ.ಮಲ್ಲಿಕಾರ್ಜುನ ನಾಗಪ್ಪ(ಪೌರಾಡಳಿತ ರಾಜ್ಯ ಸಚಿವರು)

ಉತ್ತರ

ಅ) ಇಲ್ಲ. ಆದಾಗ್ಯೂ ಪೌರಾಡಳಿತ ನಿರ್ದೇಶನಾಲಯಕ್ಕೆ ಸಲ್ಲಿಸುವ ಪ್ರಸ್ತಾವನೆಗಳು ಯಾವುದು ವಿಳಂಬವಾಗುತ್ತಿಲ್ಲ. ಸಕಾಲದಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದು ತಿಳಿಸಲು ಬಯಸಿದೆ.

ಆ, ಇ, ಮತ್ತು ಈ) ಉದ್ಭವಿಸುವುದಿಲ್ಲ.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ನಡೆದ ಅವ್ಯವಹಾರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 894(1471)

ಸದಸ್ಯರ ಹೆಸರು: ಶ್ರೀ ಅರಗ ಜ್ಞಾನೇಂದ್ರ(ತೀರ್ಥಹಳ್ಳಿ)

ಪ್ರಶ್ನೆ

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಯಲ್ಲಿ ಅವ್ಯವಹಾರದ ಬಗ್ಗೆ ಅಕೌಂಟೆಂಟ್ ಜನರಲ್ ಆಡಿಟ್ ವರದಿಯಲ್ಲಿ ಪ್ರಸ್ತಾವ ಬಂದಿದೆಯೇ?

2. ಬಂದಿದ್ದಲ್ಲಿ, ಯಾವ ಅಧಿಕಾರಿಯನ್ನು ಹೊಣೆ ಮಾಡಲಾಗಿದೆ? ಈ ಬಗ್ಗೆ ಸರ್ಕಾರ ಅಧಿಕಾರಿಯ ಮೇಲೆ ತೆಗೆದುಕೊಂಡ ಕ್ರಮ ಏನು?

3. ಇತ್ತೀಚೆಗೆ ಲೆಕ್ಕ ತಪಾಸಣೆಯ ವರದಿಯಲ್ಲಿ ಈ ಇಲಾಖೆಯಲ್ಲಿ ನಡೆದ ಅವ್ಯವಹಾರದ